**ಕರ್ನಾಟಕ ಸರ್ಕಾರ**

***ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12***

ಸಂಖ್ಯೆ:ಪಪೂಶಿಇ/ ಶೈ, ಶಾ-04/ಹೆ.ಮ.ಶು.ವಿ/2015-16 ದಿನಾಂಕ:17-10-2015

**ಅತೀ ತುರ್ತು**

ಸುತ್ತೋಲೆ

ವಿಷಯ; 2015-16ನೇ ಸಾಲಿನಲ್ಲಿ ಸರ್ಕಾರಿ ಹಾಗೂ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಥಮ ಮತ್ತು ದ್ವಿತೀಯ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಸಾಮಾನ್ಯ ವರ್ಗಕ್ಕೆ ಸೇರಿದ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರ ಮಾಹಿತಿಯನ್ನು ನೀಡುವ ಕುರಿತು.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2015-16ನೇ ಸಾಲಿನಲ್ಲಿ ಸರ್ಕಾರಿ ಹಾಗೂ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಪ್ರಥಮ, ಮತ್ತು ದ್ವಿತೀಯ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಸಾಮಾನ್ಯ ವರ್ಗಕ್ಕೆ ಸೇರಿದ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರ ಮಾಹಿತಿಯನ್ನು ಅತೀ ತುರ್ತಾಗಿ ಜಂಟಿ ನಿರ್ದೇಶಕರು (ಶೈಕ್ಷಣಿಕ), ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ ಈ ಪತ್ರ ತಲುಪಿತ 03ದಿನಗಳೊಳಗಾಗಿ ನೀಡಲು ತಿಳಿಸಿದೆ.

2015-16ನೇ ಸಾಲಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ವಿದ್ಯಾರ್ಥಿನಿಯರಿಗೆ ಸರ್ಕಾರೇತರ ಶುಲ್ಕ ವಿನಾಯ್ತಿ ಮರುಪಾವತಿಗಾಗಿ ಬಿಡುಗಡೆಯಾದ ಅನುದಾನವನ್ನು ಬಳಸಿಕೊಂಡ ಬಗ್ಗೆ ಪ್ರತ್ಯೇಕವಾಗಿ ಬಳಕೆ ಪ್ರಮಾಣ ಪತ್ರಗಳನ್ನು ಲೆಕ್ಕಶೀರ್ಷಿಕೆವಾರು ಈ ನಿರ್ದೇಶನಾಲಯಕ್ಕೆ ಮರು ಟಪಾಲಿನಲ್ಲಿ ತಪ್ಪದೆ ಸಲ್ಲಿಸಲು ಈ ಮೂಲಕ ಸೂಚಿಸಿದೆ. ತಪ್ಪಿದಲ್ಲಿ ಮುಂದಿನ ಆಗುಹೋಗುಗಳಿಗೆ ತಮ್ಮನ್ನೆ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಈ ಮೂಲಕ ತಿಳಿಸಲಾಗಿದೆ.

ಜಂಟಿ ನಿರ್ದೇಶಕರು(ಶೈಕ್ಷಣಿಕ)
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು:

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ನಿರ್ದೇಶಕರ ಆಪ್ತ ಶಾಖೆ ರವರಿಗೆ ಮಾಹಿತಿಗಾಗಿ.
3. ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ, ವೆಬ್‌ಸೈಟ್‌ನಲ್ಲಿ ಅಳವಡಿಸಲು ಮುಂದಿನ ಕ್ರಮಕ್ಕಾಗಿ.
4. ಕಛೇರಿ ಪ್ರತಿ.